**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 967/13**

**ಸಿ.ಡಬ್ಲ್ಯೂ-8 ಪಿ.ಡಬ್ಲ್ಯೂ-10**

| | | |
|---|---|---|
| ಸಾಕ್ಷಿದಾರರ ಹೆಸರು | : | ನಾಗೇಂದ್ರ ಸ್ವಾಮಿ |
| ತಂದೆಯ/ ಗಂಡನ ಹೆಸರು | : | ಅಪ್ಪಾಜಪ್ಪ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸ ಸ್ಥಳ | : | ಹೊಸ ಬೀದರಹಳ್ಳಿ |

**ದಿನಾಂಕ 12.12.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಿಪಿ 1 ರಲ್ಲಿ ಇರುವ ಸಾಕ್ಷಿ ಸಹಿಯನ್ನು ನಿಪಿ 1 (ಎಫ್) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 10 ವರ್ಷಗಳ ಹಿಂದೆ ಸರಗೂರು ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ವಿಚಾರಕ್ಕೆ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನಿಪಿ 1 ರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ನಿಪಿ 1 ಮಹಜರಗೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಅಭಿಯೋಜಕರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು, ನೀಡಲಾಯಿತು.)**

**ಪಾಟೀ ಸವಾಲುಃ  ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ದಿಃ 19.04.2013 ರಂದು ಸರಗೂರು ಠಾಣೆಯ ಹಿಂಭಾಗದ ಅಂಬೇಡ್ಕರ್ ಬಡಾವಣೆಯಲ್ಲಿ ಇರುವ ಆರೋಪಿ ಮನೆಯ ಹತ್ತಿರ ಪಂಚರ ಸಮಕ್ಷಮ ಪಂಚನಾಮೆ ಜರುಗಿಸಿದ್ದು, ಆರೋಪಿ ದನವನ್ನು ಕತ್ತರಿಸಿ ಮಾಂಸವನ್ನು ಮಾರಾಟ ಮಾಡಲು ಗೋಣಿ ಚೀಲಗಳಲ್ಲಿ ತುಂಬಿ ಇಟ್ಟಿದ್ದು, ಅದನ್ನು ನಮ್ಮಗಳ ಸಮಕ್ಷಮ ಅಮಾನತ್ತುಪಡಿಸಿಕೊಂಡು ಮಹಜರ ಮಾಡಿದ್ದು, ಸ್ಥಳದಲ್ಲಿ 3 ಗೋಣಿ ಚೀಲಗಳಲ್ಲಿ ಮಾಂಸವನ್ನು ತುಂಬಿದ್ದು, 2 ಗೋಣಿ ಚೀಲದಲ್ಲಿ ಸುಮಾರು 100 kg ಯಷ್ಟು ಹಾಗೂ ಇನ್ನೊಂದು ಗೋಣಿ ಚೀಲದಲ್ಲಿ ದನದ ಮೂಳೆಗಳು ಮತ್ತು ದನದ 2 ಕೊಂಬುಗಳು ಇದ್ದು ಅವುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಗೊತ್ತಿಲ್ಲ.

**ಪಾಟೀ ಸವಾಲುಃ  ಆರೋಪಿತರ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು).

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ.ಕೋಟೆ.**